ಕರ್ನಾಟಕ ಸರ್ಕಾರ

**ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು**

**ಸಂಖ್ಯೆ : ಸಂಖ್ಯೆ : ಸಿ5(2)ಪವ್ಯ.ಬ.13/2019-20** ದಿನಾಂಕ:16-03-2020

**ಅಧಿಸೂಚನೆ**

ವಿಷಯ :- ಸಾರ್ವಜನಿಕ ಶಿಕ್ಷಣ ಇಲಾಖೆಯ ಪತ್ರಾಂಕಿತ ವ್ಯವಸ್ಥಾಪಕರು /ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಪದೋನ್ನತಿ ನೀಡುವ ಕುರಿತು.

ಉಲ್ಲೇಖ :- ಸರ್ಕಾರದ ಆದೇಶ ಸಂಖ್ಯೆ : ಡಿಪಿಎಆರ್ 12 ಎಸ್‌ಡಿಇ 2005 ದ: 29-01-2008.

2 :- ಸರ್ಕಾರದ ಆದೇಶ ಸಂಖ್ಯೆ : ಇಡಿ 464 ಡಿಪಿಐ 2008 ದಿ : 06-01-2009.

3 :- ದಿನಾಂಕ : 09-10-2019 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿಯ ಸಭಾ ನಡವಳಿಗಳು.

4.:- ದಿನಾಂಕ:13-03-2020 ರಂದು ನಡೆದ ಕೌನ್ಸಿಲಿಂಗ್.

* * * * * *

ಸಾರ್ವಜನಿಕ ಶಿಕ್ಷಣ ಇಲಾಖೆಯ ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಗ್ರೂಪ್ 'ಬಿ' ವೃಂದದ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು [ಬೋಧಕೇತರ) ವೃಂದದಿಂದ ಪತ್ರಾಂಕಿತ ಸಹಾಯಕರ ಹುದ್ದೆಗೆ ಉಲ್ಲೇಖಿತ (1) ರ ಸರ್ಕಾರದ ಆದೇಶದಲ್ಲಿ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರನ್ನು ನೇಮಕಾತಿ ಪ್ರಾಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಗ್ರೂಪ್ 'ಬಿ' ವೃಂದದ ಹುದ್ದೆಗಳಿಗೆ ಬಡ್ತಿಯನ್ನು ನೀಡುವ ಸಲುವಾಗಿ ಆಯುಕ್ತಾಲಯವಾರು ಇಲಾಖಾ ಮುಂಬಡ್ತಿ ಸಮಿತಿಯನ್ನು ಉಲ್ಲೇಖಿತ (2) ರ ಸರ್ಕಾರದ ಆದೇಶದಲ್ಲಿ ರಚಿಸಿ ಆದೇಶಿಸಲಾಗಿದೆ. ಅದರಂತೆ, ಬೆಂಗಳೂರು ಆಯುಕ್ತಾಲಯದ ಆಡಳಿತ ವ್ಯಾಪ್ತಿಯಲ್ಲಿ ಬರುವ ಪತ್ರಾಂಕಿತ ಸಹಾಯಕರು (ಬೋಧಕೇತರ) ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪತ್ರಾಂಕಿತ ವ್ಯವಸ್ಥಾಪಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ವೃಂದ ಮತ್ತು ನೇಮಕಾತಿ ನಿಯಮಾವಳಿಗಳಂತೆ ಸ್ಥಾನಪನ್ನ ಬಡ್ತಿಯನ್ನು ನೀಡುವ ಸಲುವಾಗಿ ದಿನಾಂಕ :09-10-2019 ರಂದು ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ಇಲಾಖಾ ಮುಂಬಡ್ತಿಯ ಸಭೆಯನ್ನು ನಡೆಸಲಾಯಿತು.

ದಿನಾಂಕ:09-10-2019 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಕ್ರಮ ಸಂಖ್ಯೆ: 08 ಮತ್ತು 09 ರ ಅಧಿಕಾರಿಗಳಿಗೆ ಮುಂದೆ ವಿವಿಧ ಕಾರಣಗಳಿಂದ ಉದ್ಭವವಾಗುವ ಖಾಲಿ ಹುದ್ದೆಗಳಿಗೆ ಅನುಸಾರವಾಗಿ ಖಾಲಿಯಾಗುವ ದಿನಾಂಕದ ನಂತರ ಮುಂಬಡ್ತಿ ನೀಡಿ ಕೌನ್ಸಿಲಿಂಗ್ ಮುಖೇನ ಸ್ಥಳವನ್ನು ಆಯ್ಕೆ ಮಾಡಿಕೊಳ್ಳಲು ತೀರ್ಮಾನಿಸಿದಂತೆ, ಉದ್ಭವವಾದ ಹುದ್ದೆಗಳಿಗೆ ಬಡ್ತಿ ನೀಡಲು ಅರ್ಹ ಅಧಿಕಾರಿಗಳಿಗೆ ದಿನಾಂಕ: 13-03-2020 ರಂದು ಸ್ಥಳ ಆಯ್ಕೆಗಾಗಿ ಕೌನ್ಸಿಲಿಂಗ್ ನಡೆಸಲಾಗಿದೆ. ಅದರಂತೆ, ಅಧಿಕಾರಿಗಳು ಅವರ ಹೆಸರಿನ ಮುಂದೆ ಸೂಚಿಸಿರುವ ಸ್ಥಳವನ್ನು ಆಯ್ಕೆ ಮಾಡಿಕೊಂಡಿರುತ್ತಾರೆ. ಈ ಅಧಿಕಾರಿಗಳು ಸ್ಥಳ ಆಯ್ಕೆ ಮಾಡಿಕೊಂಡಿರುವಂತೆ, ಪತ್ರಾಂಕಿತ ವ್ಯವಸ್ಥಾಕರು/ಸಹಾಯಕ ನಿರ್ದೇಶಕರು (ಬೋಧಕೇತರ) ಹುದ್ದೆಯಿಂದ ಪತ್ರಾಂಕಿತ ಸಹಾಯಕ ಹುದ್ದೆಯ ವೇತನ ಶ್ರೇಣಿ ರೂ. 43100-83900 ರಲ್ಲಿ ಸ್ಥಾನಪನ್ನ ಬಡ್ತಿಯನ್ನು ನೀಡಿ ಆದೇಶಿಸಲಾಗಿದೆ. ಹಾಗೂ ಸ್ಥಳ ನಿಯುಕ್ತಿಗೊಳಿಸಿ ಆದೇಶವನ್ನು ಹೊರಡಿಸಿದೆ. ಬಡ್ತಿ ಹೊಂದಿದ ಅಧಿಕಾರಿಗಳು ಆಯ್ಕೆ ಮಾಡಿಕೊಂಡ ಕಛೇರಿಯಲ್ಲಿ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಆರ್ಥಿಕ ಸೌಲಭ್ಯಕ್ಕೆ ಅರ್ಹರಾಗುತ್ತಾರೆ.

ಸ್ಥಾನಪನ್ನ ಬಡ್ತಿಯನ್ನು ಹೊಂದಿರುವ ಪತ್ರಾಂಕಿತ ಸಹಾಯಕರು ಈ ಆದೇಶ ಜಾರಿಯಾದ 15 ದಿನಗಳೊಳಗಾಗಿ ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಕಛೇರಿಯಿಂದ ಬಿಡುಗಡೆಯಾಗಿ, ಬಡ್ತಿಯನ್ನು ನೀಡಿ ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿಗಳಲ್ಲಿ ಕರ್ತವ್ಯಕ್ಕೆ ಹಾಜರಾಗಲು ಈ ಮೂಲಕ ಆದೇಶಿಸಲಾಗಿದೆ. ತಪ್ಪಿದಲ್ಲಿ ನಿಯಮಾನುಸಾರ ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

| ಕ್ರಮ ಸಂಖ್ಯೆ | ಜೇಷ್ಟತಾ ಸಂಖ್ಯೆ | ಬಡ್ತಿ ಹೊಂದಿದ ಅಧಿಕಾರಿಗಳ ಹೆಸರು ಮತ್ತು ಕಛೇರಿ ವಿಳಾಸ ಶ್ರೀ / ಶ್ರೀಮತಿ | ಬಡ್ತಿ ಪಡೆದ ಪದನಾಮ/ಕಛೇರಿ ಹೆಸರು/ ಮತ್ತು ವಿಳಾಸ |
|---|---|---|---|
| 01 | 200 | ಶ್ರೀ.ಬಿ.ವಿ.ಪ್ರಸಾದ್ ಬಾಬು ಪತ್ರಾಂಕಿತ ವ್ಯವಸ್ಥಾಪಕರು, ಪ್ರಸ್ತುತ ನಿಯೋಜನೆ ಮೇರೆಗೆ ವಿಶೇಷ ಆಧಿಕಾರಿ, ಮಾನ್ಯ ಮುಖ್ಯ ಮಂತ್ರಿಗಳ ಸಚಿವಾಲಯ, ವಿಧಾನ ಸೌಧ, ಬೆಂಗಳೂರು] | ಪತ್ರಾಂಕಿತ ಸಹಾಯಕರು, ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಡ್ಯ ಜಿಲ್ಲೆ. ಮಂಡ್ಯ. |

**[ಕರಡು ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ]**

**[ಅರುಳ್ ಕುಮಾರ್]**
**ಜಂಟಿ ನಿರ್ದೇಶಕರು[ಆಡಳಿತ]**

**ಇವರಿಗೆ:–**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು ಇವರಿಗೆ Ink Signed Copy.
3) ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಯವರ ಅಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
4) ಮಾನ್ಯ ಮುಖ್ಯ ಮಂತ್ರಿಯವರ ಉಪ ಕಾರ್ಯದರ್ಶಿ[ಆಡಳಿತ]ವಿಧಾನ ಸೌಧ ಬೆಂಗಳೂರು.
5) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು ಇವರ ಮಾಹಿತಿಗಾಗಿ,
6) ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್, ಮಂಡ್ಯ ಜಿಲ್ಲೆ.
7) ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಜಂಟಿ ನಿರ್ದೇಶಕರ ಕಛೇರಿ, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಮೈಸೂರು ವಿಭಾಗ, ಡಿ.ಸುಬ್ಬಯ್ಯ ರಸ್ತೆ, ಮೈಸೂರು–24
8) ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಡ್ಯ /ಮಧುಗಿರಿ ಜಿಲ್ಲೆ
9) ಈ ಕಛೇರಿಯ ಎಲ್ಲಾ ಶಾಖಾಧಿಕಾರಿಗಳಿಗೆ,
10) ಕ್ಷೇತ್ರ ಶಿಕ್ಷಣಾಧಿಕಾರಿ, ಮಧುಗಿರಿ ತಾಲ್ಲೂಕು, ಮಧುಗಿರಿ ಶೈಕ್ಷಣಿಕ ಜಿಲ್ಲೆ
11) ಈ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್–www.schooleducation.kar.in "ನಲ್ಲಿ ಪ್ರಕಟಿಸಲಾಗಿದೆ.
12) ಕಛೇರಿ ಪ್ರತಿ.